155 ನೇ ದಿ-330 = 67
4xx
13.08.25

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ವಿವೇಕಾನಂದ ಇವರು ನಿಯಮ 330ರಡಿ ಪ್ರಸ್ತಾಪಿಸಿರುವ ಸೂಚನೆಗೆ ಸರ್ಕಾರದ ಉತ್ತರ.**

**ಸೂಚನೆ:**

ಮಾನ್ಯ ಸಮಾಜ ಕಲ್ಯಾಣ ಸಚಿವರು, SWD/942/PKV/2024 ದಿನಾಂಕ:03-10-2024, ಮಂಡ್ಯ ನಗರದಲ್ಲಿ ನಿರ್ಮಿಸಲಾಗಿರುವ ಡಾ|| ಬಿ.ಆರ್.ಅಂಬೇಡ್ಕರ್ ಭವನದ ದುರಸ್ತಿ ಹಾಗೂ ಇನ್ನಿತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ರೂ.3.00 ಕೋಟಿಗಳ ಅನುದಾನವನ್ನು ಮಂಜೂರು ಮಾಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದ್ದು, ಸದರಿ ಮನವಿಯಲ್ಲಿ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ರವರಿಂದ ವರದಿ ಪಡೆದು ಮಾರ್ಗಸೂಚಿಯನ್ವಯ ಪರಿಶೀಲಿಸಿ ಸಂಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರಿಗೆ ತಿಳಿಸಲಾಗಿದೆ. ಆದರೆ ಮಂಡ್ಯ ಜಿಲ್ಲೆಯ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವರು ವರದಿ ಸಲ್ಲಿಸದಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಂಡು ಕೂಡಲೇ ವರದಿಯನ್ನು ಪಡೆದು ಡಾ|| ಬಿ.ಆರ್.ಅಂಬೇಡ್ಕರ್ ಭವನ ದುರಸ್ತಿ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ವಿಷಯದ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:**

ಮಂಡ್ಯ ಜಿಲ್ಲಾ ಕೇಂದ್ರುದಲ್ಲಿನ ಡಾ|| ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ರೂ.992.00 ಲಕ್ಷಗಳಿಗೆ ಮಂಜೂರಾತಿ ನೀಡಿ, ರೂ.917.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ರವರಿಗೆ ಬಿಡುಗಡೆ ಮಾಡಲಾಗಿರುತ್ತದೆ.

ಸರ್ಕಾರದ ಪತ್ರ ಸಂಖ್ಯೆ: SWD/708/PKV/2024 ದಿನಾಂಕ: 25-10-2024 ರಲ್ಲಿ ಮಂಡ್ಯ ಜಿಲ್ಲಾ ಕೇಂದ್ರುದಲ್ಲಿನ ಡಾ|| ಬಿ.ಆರ್.ಅಂಬೇಡ್ಕರ್ ಭವನದ ದುರಸ್ತಿ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ರವರಿಂದ ಮಾರ್ಗಸೂಚಿಯನ್ವಯ ಪರಿಶೀಲಿಸಿ ಸರ್ಕಾರಕ್ಕೆ ಸಂಪೂರ್ಣ ವರದಿಯನ್ನು ಸಲ್ಲಿಸುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ.

ಸದರಿ ಪ್ರಸ್ತಾವನೆ ಸಂಬಂಧ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಮಂಡ್ಯ ಜಿಲ್ಲೆ ರವರ ಪತ್ರ ದಿನಾಂಕ: 03-04-2025 ರಲ್ಲಿ ಮಂಡ್ಯ ಟೌನ್ ನಲ್ಲಿರುವ ಡಾ|| ಬಿ.ಆರ್ ಅಂಬೇಡ್ಕರ್ ಭವನಕ್ಕೆ ಮೂಲಭೂತ ಸೌಕರ್ಯಗಳಾದ ಸೋಲಾರ್, ಮ್ಯೂಜಿಯಂ, ಮಳಿಗೆಗಳು ಮತ್ತು ಕಾರ್ ಪಾರ್ಕಿಂಗ್ ಮತ್ತು ಎಸಿ ಅಳವಡಿಕೆ ಗಳಿಗೆ ರೂ.250.00 ಲಕ್ಷಗಳನ್ನು ಮಂಜೂರು ಮಾಡಲು ಕೋರಲಾಗಿರುತ್ತದೆ.

ಮಂಡ್ಯ ಜಿಲ್ಲೆ, ಮಂಡ್ಯ ನಗರದಲ್ಲಿ ಡಾ|| ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ ಸಂಬಂಧ ಈಗಾಗಲೇ ಸರ್ಕಾರದಿಂದ ರೂ.992.00 ಲಕ್ಷಗಳನ್ನು ಮಂಜೂರು ಮಾಡಲಾಗಿದ್ದು, ಹೆಚ್ಚುವರಿಯಾಗಿ ಮಂಜೂರು ಮಾಡಲು ಜಿಲ್ಲೆಯಿಂದ ಕೋರಲಾಗಿರುವ ರೂ.250.00 ಲಕ್ಷಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

**ಸಂಖ್ಯೆ: SWD/264/PKV/2025**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.